# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರೈತ ಸಂಪರ್ಕ ಕೇಂದ್ರ ಬಲವರ್ಧನ ಕುರಿತು 2 ತಿಂಗಳ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಕೃಇ 170 ಕೃಇಕ 2018, ಬೆಂಗಳೂರು, ದಿನಾಂಕ 06.02.2019

2. ಮಾನ್ಯ ಕೃಷಿ ಸಚಿವರ ವಿಶೇಷ ಕರ್ತವ್ಯಾಧಿಕಾರಿ ರವರ ಟಿಪ್ಪಣಿ ಸಂಖ್ಯೆ: ಕೃಸ/ವಿಕಅ/761/2018-19 ದಿನಾಂಕ 03.04.2019.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕೃಷಿ ಇಲಾಖೆಯ ವ್ಯಾಪ್ತಿಯಲ್ಲಿರುವ ರಾಜ್ಯದ ರೈತ ಸಂಪರ್ಕ ಕೇಂದ್ರಗಳನ್ನು ರೈತ ಸ್ನೇಹಿಯಾಗಿ ಸಬಲಗೊಳಿಸಲು ಹಾಗೂ ರೈತ ಸಂಪರ್ಕ ಕೇಂದ್ರಗಳ ಬಲವರ್ಧನೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅಧ್ಯಯನ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸಲು ಡಾ: ಎಸ್.ಎ. ಪಾಟೀಲ, ವಿಶ್ರಾಂತ ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ ಹಾಗೂ ಸದರಿ ಸಮಿತಿಯು 2 ತಿಂಗಳ ಅವಧಿಯೊಳಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಟಿಪ್ಪಣಿಯಲ್ಲಿ, ಮಾನ್ಯ ಕೃಷಿ ಸಚಿವರವರು ಸರ್ಕಾರಿ ಆದೇಶ ಸಂಖ್ಯೆ: ಕೃಇ 170 ಕೃಇಕ 2018 ದಿನಾಂಕ 06.02.2019 ರಲ್ಲಿ ರೈತ ಸಂಪರ್ಕ ಕೇಂದ್ರ ಬಲವರ್ಧನೆ ಕುರಿತು ತಂಡವನ್ನು ರಚಿಸಿ 2 ತಿಂಗಳ ಅವಧಿಯಲ್ಲಿ ಸಲಹೆಯನ್ನು ನೀಡುವ ಬಗ್ಗೆ ತಿಳಿಸಲಾಗಿತ್ತು. ಸದರಿ ತಂಡದ ಅಧ್ಯಕ್ಷರು ಹಾಗೂ ವಿಶ್ರಾಂತ ಕುಲಪತಿಗಳಾದ ಡಾ: ಎಸ್.ಎ. ಪಾಟೀಲ ಇವರು ದಿನಾಂಕ 25.03.2019 ರಂದು ಕೃಷಿ ಇಲಾಖೆಯ ಆಯುಕ್ತರು ಮತ್ತು ನಿರ್ದೇಶಕರನ್ನು ಭೇಟಿ ಮಾಡಿ ರಾಜ್ಯದಲ್ಲಿ ಲೋಕಾಸಭಾ ಚುನಾವಣೆಯ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಹಾಗೂ ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರವಾಗಿರುವುದರಿಂದ ರೈತ ಸಂಪರ್ಕ ಕೇಂದ್ರ ಬಲವರ್ಧನೆ ಕುರಿತು ನೀಡುವ ವರದಿಯನ್ನು ಆಗಸ್ಟ್ 07, 2019ರ ವರೆಗೆ ಕಾಲಾವಕಾಶವನ್ನು ನೀಡುವಂತೆ ಕೋರಿರುತ್ತಾರೆ. ಈ ಬಗ್ಗೆ ಕಾಲಾವಕಾಶವನ್ನು ನೀಡಿ ಮರು ಆದೇಶವನ್ನು ಹೊರಡಿಸುವಂತೆ ನಿರ್ದೇಶಿಸಲಾಗಿದೆ.

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 170 ಕೃಇಕ 2018, ಬೆಂಗಳೂರು, ದಿನಾಂಕ 17.05.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರಿ ಆದೇಶ ಸಂಖ್ಯೆ: ಕೃಇ 170 ಕೃಇಕ 2018 ದಿನಾಂಕ 06.02.2019 ರಲ್ಲಿ ರೈತ ಸಂಪರ್ಕ ಕೇಂದ್ರ ಬಲವರ್ಧನೆ ಕುರಿತು ಡಾ: ಎಸ್.ಎ. ಪಾಟೀಲ, ವಿಶ್ರಾಂತ ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಗೆ ವರದಿ ಸಲ್ಲಿಸಲು ಆಗಸ್ಟ್ 07, 2019ರ ವರೆಗೆ ಕಾಲಾವಕಾಶವನ್ನು ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

B S Nagaratnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.

2. ಪ್ರಧಾನ ಮಹಾಲೇಖಪಾಲರು(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–1
3. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು
4. ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು
5. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ / ರಾಯಚೂರು
6. ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು
7. ಡಾ: ಎಸ್.ಎ. ಪಾಟೀಲ, ವಿಶ್ರಾಂತ ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ
8. ಶ್ರೀ ಎಸ್.ಎಸ್. ಪಾಟೀಲ, ಸಂಶೋಧನಾ ನಿರ್ದೇಶಕರು, ಕೃಷಿ ವಿಶ್ವವಿದ್ಯಾಲಯ, ಧಾರವಾಡ
9. ಶ್ರೀ ರವಿ ದೇಶ್‌ಮುಖ್, HoD, KVK Bidar (Janawada), ಕೃಷಿ ವಿಶ್ವವಿದ್ಯಾಲಯ, ರಾಯಚೂರು
10. ಮಾನ್ಯ ಕೃಷಿ ಸಚಿವರವರ ಆಪ್ತ ಕಾರ್ಯದರ್ಶಿಗಳು
11. ರಾಜ್ಯದ ಎಲ್ಲಾ ಜಂಟಿ ಕೃಷಿ ನಿರ್ದೇಶಕರುಗಳಿಗೆ
12. ರಾಜ್ಯದ ಎಲ್ಲಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳಿಗೆ
13. ರಾಜ್ಯದ ಎಲ್ಲಾ ಹೋಬಳಿ ಮಟ್ಟದ ಕೃಷಿ ಅಧಿಕಾರಿಗಳಿಗೆ
14. ಸರ್ಕಾರದ ಜಂಟಿ ಕಾರ್ಯದರ್ಶಿ ಮತ್ತು ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ, ಬೆಂಗಳೂರು.
15. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
16. ಸರ್ಕಾರದ ಉಪ ಕಾರ್ಯದರ್ಶಿ–1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ, ಬೆಂಗಳೂರು.
17. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು.

(ಕ್ರಮ ಸಂಖ್ಯೆ: 11, 12, 13 ಕೃಷಿ ಆಯುಕ್ತರವರ ಮೂಲಕ)